## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.396/2024

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಏಳುಮಲೈ | CW: 10 | PW: 5 |
| ತಂದೆಯ ಹೆಸರು | : | ರಾಮಪ್ಪ | | |
| ವಯಸ್ಸು | : | 53 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಚೆನ್ನಿಕಟ್ಟೆ | | |

ದಿನಾಂಕಃ 17.02.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

1 ನೇ ಆರೋಪಿ ಗೊತ್ತಿಲ್ಲ. ಚಾಸಾ 7 ಮತ್ತು 11 ರವರು ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ, ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಈ ಸಂಬಂಧ ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 5 ರಿಂದ 10 ಪೋಟೋಗಳಲ್ಲಿ ತನ್ನನ್ನು ತಾನು ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಸಾಕ್ಷಿಯು ನಿಪಿ 2 ಸ್ಥಳ ಪಂಚನಾಮೆ, ನಿಪಿ 3 ಕಚ್ಚಾ ನಕಾಶೆ ಮತ್ತು ನಿಪಿ 4 ವಾಹನ ಪಂಚನಾಮೆಗಳಲ್ಲಿ ತನ್ನ ಹೆಬ್ಬೆಟ್ಟನ್ನು ನೋಡಿ ಗುರುತಿಸಿರುತ್ತಾರೆ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-</u>

ದಿಃ 23.02.2024 ರಂದು ಚಾಸಾ 7 ರವರು ಸ್ಥಳ ತೋರಿಸಿದ ಮೇರೆಗೆ ಪೊಲೀಸರು ನನ್ನ ಮತ್ತು ಚಾಸಾ 11 ರವರ ಸಮಕ್ಷಮ ಸಂಜೆ 4.30 ರಿಂದ 5.15 ರ ಸಮಯದಲ್ಲಿ ನಿಪಿ 2 ರಂತೆ ಸ್ಥಳ ಪಂಚನಾಮೆ ಜರುಗಿಸಿ , ನಿಪಿ 3 ರಂತೆ ಕಚ್ಚಾ ನಕಾಶೆ ತಯಾರಿಸಿ , ನಿಪಿ 5 ಮತ್ತು 6 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ನಮ್ಮಗಳ ಸಮಕ್ಷಮ ಸವಳಂಗ ಉಪಪೊಲೀಸ್ ಠಾಣಾ ಆವರಣದಲ್ಲಿ ಪೋಲೀಸರು ಸಂಜೆ 5.30 ರಿಂದ 6.15 ರ ಸಮಯದಲ್ಲಿ ನಿಪಿ 4 ರಂತೆ ವಾಹನ ಪಂಚನಾಮೆ ಜರುಗಿಸಿ ಕೆಎ 14 ಬಿ 8467 ನಂಬರ್ ನ ಕಾರು ಹಾಗೂ ಕೆಎ 17 ಇಎಲ್ 8741 ನಂಬರ್ ನ ಮೋಟಾರ್ ಸೈಕಲ್ ನ್ನು ಅಮಾನತ್ತುಪಡಿಸಿಕೊಂಡು ನಿಪಿ 7 ರಿಂದ 10 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.